ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಕೋಲಾರ ಡಿ.ಸಿ.ಸಿ ಬ್ಯಾಂಕ್‌ನಿಂದ ನೀಡಿರುವ ಸಾಲಗಳ ಬಗ್ಗೆ

ಶ್ರೀ ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :-

252 (218) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 3 ವರ್ಷಗಳಲ್ಲಿ ಕೋಲಾರ ಡಿ.ಸಿ.ಸಿ. ಬ್ಯಾಂಕ್ ವತಿಯಿಂದ ನೀಡಲಾಗಿರುವ ಸಾಲದ ಮೊತ್ತವೆಷ್ಟು ; (ವರ್ಷ ಹಾಗೂ ವಿಧಾನಸಭಾ ಕ್ಷೇತ್ರಗಳವಾರು ವಿವರ ನೀಡುವುದು)

(ಆ) ಇದರಲ್ಲಿ 0% ಬಡ್ಡಿ ದರ, 4% ಬಡ್ಡಿ ದರ ಮತ್ತು 4% ಬಡ್ಡಿಗಿಂತ ಹೆಚ್ಚಿನ ಬಡ್ಡಿಗೆ ನೀಡಿರುವ ಸಾಲದ ಮೊತ್ತವೆಷ್ಟು ; (ವರ್ಷ ಹಾಗೂ ವಿಧಾನಸಭಾ ಕ್ಷೇತ್ರಗಳವಾರು ವಿವರ ನೀಡುವುದು)

(ಇ) ಈ ಸಾಲಗಳಿಗೆ ಕಳೆದ 3 ವರ್ಷಗಳಲ್ಲಿ ಸರ್ಕಾರದಿಂದ ಬಂದಿರುವ ಸಬ್ಸಿಡಿ ಮೊತ್ತವೆಷ್ಟು ; ಮತ್ತು ಸಬ್ಸಿಡಿ ಹಣವನ್ನು ನೀಡುವಾಗ ಸರ್ಕಾರ ಅನುಸರಿಸಿರುವ ಮಾನದಂಡಗಳೇನು ;

(ಈ) ಸ್ತ್ರೀಶಕ್ತಿ ಸಂಘಗಳ ಸದಸ್ಯರುಗಳಿಗೆ 0% ಬಡ್ಡಿ ದರದಲ್ಲಿ ಸಾಲ ನೀಡುವಾಗ ಬ್ಯಾಂಕ್‌ಗಳು ಅನುಸರಿಸಬೇಕಾಗಿರುವ ನಿಯಮಗಳೇನು;

(ಉ) ಇಂತಹ ಸಾಲಗಳನ್ನು ನೀಡುವಾಗ ಪ್ರತಿ ಸೊಸೈಟಿಗಳು ವೈಭಯುತವಾಗಿ ಕಾರ್ಯಕ್ರಮಗಳನ್ನು ನಡೆಸುವ ಅವಶ್ಯಕತೆ ಇದೆಯೇ; ಈ ಕಾರ್ಯಕ್ರಗಳಿಗೆ ತಗಲುವ ವೆಚ್ಚವನ್ನು ಭರಿಸುವವರಾರು ; (ವಿವರಗಳನ್ನು ನೀಡುವುದು)

(ಊ) ಇಂತಹ ವೈಭವಯುತ ಕಾರ್ಯಕ್ರಮಗಳನ್ನು ರದ್ದುಗೊಳಿಸಿ ಅರ್ಹ ಫಲಾನುಭವಿಗಳ ಖಾತೆಗಳಿಗೆ ನೇರವಾಗಿ ಸಾಲದ ಮೊತ್ತವನ್ನು ಜಮೆ ಮಾಡಲು ಸರ್ಕಾರ ಕ್ರಮಕೈಗೊಳ್ಳುವುದೇ ;

(ಋ) ಹಾಗಿದ್ದಲ್ಲಿ, ಇದಕ್ಕೆ ಕಾರಣಗಳೇನು ? (ವಿವರಗಳನ್ನು ನೀಡುವುದು)